**All India Radio: Bangalore**
**Regional Bulletin In Kannada**
**01.03.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**01.03.2025 / 2.30 p.m.**

**<><><><>**

ಮುಖ್ಯಾಂಶಗಳು

1. ರಾಜ್ಯದ ತೆರಿಗೆ ಪಾಲು ಕಡಿತ ಪ್ರಸ್ತಾವನೆಗೆ ಕೇಂದ್ರದ ವಿರುದ್ಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅಸಮಾಧಾನ
2. ಬೆಂಗಳೂರಿನಲ್ಲಿ ಇಂದಿನಿಂದ ೧೬ನೇ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ
3. ಮುಂದಿನ ವಾರ ಎಚ್‌ಎಎಲ್ ವಿಮಾನ ನಿಲ್ದಾಣ ಪುನರಾರಂಭಿಸುವ ಕುರಿತು ಕೇಂದ್ರ ಸಚಿವರೊಂದಿಗೆ ಚರ್ಚೆ - ಸಂಸದ ತೇಜಸ್ವಿ ಸೂರ್ಯ
4. ಭಾಷೆ ಆಧಾರದ ಮೇಲೆ ದ್ವೇಷ ಸಾಧನೆ ಸರಿಯಲ್ಲ ; ಸಹಕಾರ ಸಚಿವ ಕೆ.ಎನ್. ರಾಜಣ್ಣ ಅಭಿಮತ
5. ಡಬ್ಲ್ಯೂಪಿಎಲ್ ಕ್ರಿಕೆಟ್ ಟೂರ್ನಿ; ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು-ಡೆಲ್ಲಿ ಕ್ಯಾಪಿಟಲ್ಸ್ ಮುಖಾಮುಖಿ

<><><><>

ರಾಜ್ಯದ ತೆರಿಗೆ ಪಾಲನ್ನು ಶೇಕಡಾ ೪೧ರಿಂದ ೪೦ಕ್ಕೆ ಇಳಿಸಲು ಶಿಫಾರಸು ಮಾಡುವಂತೆ ಹಣಕಾಸು ಆಯೋಗಕ್ಕೆ ಸೂಚಿಸಲು ಕೇಂದ್ರ ಸರ್ಕಾರ ಸಿದ್ಧತೆ ನಡೆಸಿದೆ ಎಂದು ವರದಿಯಾಗಿದೆ. ಇದು ಒಕ್ಕೂಟ ಪ್ರಜಾಪ್ರಭುತ್ವ ವ್ಯವಸ್ಥೆಯ ವಿರೋಧಿ ನಡೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಜಾಲತಾಣದಲ್ಲಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.
ನಮ್ಮ ನ್ಯಾಯಯುತ ತೆರಿಗೆ ಪಾಲಿಗಾಗಿ ನಡೆಸುತ್ತಿರುವ ಮಾತುಕತೆ ವಿಫಲವಾದರೆ ಮುಂದಿನ ದಿನಗಳಲ್ಲಿ ಅನಿವಾರ್ಯವಾಗಿ ನಾವು ಬೀದಿಗಿಳಿದು ಪ್ರತಿಭಟನೆ ನಡೆಸಬೇಕಾಗಬಹುದು ಎಂದು ಎಚ್ಚರಿಕೆ ನೀಡಿದ್ದಾರೆ.

<><><><>

'ಸರ್ವಜನಾಂಗದ ಶಾಂತಿಯ ತೋಟ' ಎಂಬ ಧ್ಯೇಯದೊಂದಿಗೆ ನಡೆಯಲಿರುವ '೧೬ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ'ವನ್ನು ಇಂದು ಸಂಜೆ ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ. ಇಂದಿನಿಂದ ಮಾರ್ಚ್ ೮ರ ವರೆಗೆ ಚಲನಚಿತ್ರೋತ್ಸವ ನಡೆಯಲಿದ್ದು, ೧೩ ಚಿತ್ರಮಂದಿರಗಳಲ್ಲಿ ಸುಮಾರು ೬೦ ದೇಶಗಳ ೨೦೦ಕ್ಕೂ ಹೆಚ್ಚು ಚಲನಚಿತ್ರಗಳ ೪೦೦ ಪ್ರದರ್ಶನಗಳು ಇರಲಿವೆ. ದೇಶ ವಿದೇಶಗಳ ಕಲಾವಿದರು, ನಿರ್ಮಾಪಕರು ತಮ್ಮ ಚಿತ್ರಗಳನ್ನು ಪ್ರದರ್ಶಿಸಲಿದ್ದಾರೆ. ಇಂದು ಉದ್ಘಾಟನಾ ಚಿತ್ರವಾಗಿ ಇಂಡಿಯಾ ಫೈಯರ್

ಚಿತ್ರ ರಾತ್ರಿ ಲಕ್ಕೆ ಪ್ರದರ್ಶನ ಕಾಣಲಿದೆ. ಈಗಾಗಲೇ ೩ ಸಾವಿರಕ್ಕೂ ಹೆಚ್ಚು ಪ್ರತಿನಿಧಿಗಳು ಹೆಸರು ನೊಂದಾಯಿಸಿಕೊಂಡಿದ್ದು, ಚಲನಚಿತ್ರ ವೀಕ್ಷಿಸಲು ಸಿನಿಮಾಸಕ್ತರು ಕಾತುರರಾಗಿದ್ದಾರೆ.

<><><><>

ಬೆಂಗಳೂರಿನಲ್ಲಿರುವ ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್-ಎಚ್‌ಎಎಲ್ ವಿಮಾನ ನಿಲ್ದಾಣವನ್ನು ಪುನರಾರಂಭಿಸುವ ಕುರಿತು ಚರ್ಚಿಸಲು ಮುಂದಿನ ವಾರ ಸಭೆ ಕರೆಯಲಾಗುವುದು ಎಂದು ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ ತಿಳಿಸಿದ್ದಾರೆ. ಈ ತಿಂಗಳ ಎರಡನೇ ವಾರದಲ್ಲಿ ನಾಗರಿಕ ವಿಮಾನಯಾನ ಸಚಿವರ ನೇತೃತ್ವದಲ್ಲಿ ಸಭೆ ನಡೆಯಲಿದೆ. ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರ, ನಾಗರಿಕ ವಿಮಾನಯಾನ ಮಹಾನಿರ್ದೇಶನಾಲಯ, ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಮತ್ತು ಎಚ್‌ಎಎಲ್‌ನ ಅಧಿಕಾರಿಗಳು ಭಾಗವಹಿಸಲಿದ್ದಾರೆ ಎಂದು ಅವರು ಹೇಳಿದ್ದಾರೆ. ಹಳೆಯ ವಿಮಾನ ನಿಲ್ದಾಣ ಪುನರಾರಂಭಿಸುವುದರಿಂದ ಬೆಂಗಳೂರಿಗೆ ಹಲವು ರೀತಿಯಲ್ಲಿ ಸಹಾಯಕವಾಗಲಿದೆ. ನಗರದ ಹೃದಯ ಭಾಗದಲ್ಲಿ ವಾಣಿಜ್ಯ ವಿಮಾನ ನಿಲ್ದಾಣದ ಸೌಲಭ್ಯ ಕಲ್ಪಿಸಲಿದೆ. ಬಿಐಎಎಲ್‌ನ ಸಾಮರ್ಥ್ಯ ಹೆಚ್ಚಿಸಲಿದೆ. ಜೊತೆಗೆ ಎಚ್‌ಎಎಲ್‌ಗೆ ಆದಾಯ ಹರಿದು ಬರಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಕನ್ನಡಿಗರು ಮತ್ತು ಮರಾಠಿಗರ ನಡುವೆ ಭಾಷಾವಾರು ವಿಚಾರದಲ್ಲಿ ನಡೆಯುತ್ತಿರುವ ಸಂಘರ್ಷವನ್ನು ಶಾಂತಿಯುತವಾಗಿ ಬಗೆಹರಿಸಲು ಸರ್ಕಾರ ಮುಂದಾಗಿದೆ ಎಂದು ಸಹಕಾರ ಸಚಿವ ಕೆ.ಎನ್.ರಾಜಣ್ಣ ತಿಳಿಸಿದ್ದಾರೆ. ಹಾಸನದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತಾಡಿದ ಅವರು, ಯಾವುದೇ ಭಾಷೆ ಆಧಾರದ ಮೇಲೆ ಯಾರನ್ನು ದ್ವೇಷ ಮಾಡುವುದು ಸರಿಯಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ. ಕನ್ನಡಿಗರು ಮರಾಠಿಗರನ್ನು ದ್ವೇಷ ಮಾಡೋದು, ಮರಾಠಿಗರು ಕನ್ನಡಿಗರನ್ನು ದ್ವೇಷ ಮಾಡುವ ಪ್ರಕ್ರಿಯೆ ಕೆಲವರಿಂದ ನಡೆದಿದ್ದು, ಇದಕ್ಕೆ ಕಡಿವಾಣ ಹಾಕಲಾಗುವುದು ಎಂದು ತಿಳಿಸಿದ್ದಾರೆ.

**ಧ್ವನಿ : ಕೆ.ಎನ್. ರಾಜಣ್ಣ (೨೯ ಸೆಕೆಂಡ್‌ಗಳು)**

<><><><>

ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆ ಆವರಣದಲ್ಲಿ ಇಂದು ಓಪನ್ ಡೇ ನಡೆಯುತ್ತಿದೆ. ಸಾರ್ವಜನಿಕರು ಯಾರು ಬೇಕಾದರೂ ಭೇಟಿ ನೀಡಿ, ವಿಜ್ಞಾನ ಮತ್ತು ತಂತ್ರಜ್ಞಾನದ ಹಲವು ಸಂಶೋಧನಾ ಚಟುವಟಿಕೆಗಳನ್ನು ವೀಕ್ಷಿಸಬಹುದು. ಸಂಜೆ ೫ರವರೆಗೆ ಸಾರ್ವಜನಿಕರಿಗೆ ಮುಕ್ತ ಅವಕಾಶ ನೀಡಲಾಗಿದೆ. ಹಲವು ವೈಜ್ಞಾನಿಕ ಪ್ರಯೋಗಗಳ ನೇರ ವೀಕ್ಷಣೆ ಸಿಡಿಲು ಉಂಟಾಗುವ ರೀತಿ ಆಕಾಶಕ್ಕೆ ಕ್ಷಿಪಣಿ ಹಾರುವುದು ಸೇರಿದಂತೆ ಹಲವು ಸಂಶೋಧನಾ ಚಟುವಟಿಕೆಗಳನ್ನು ಖುದ್ದು ವೀಕ್ಷಿಸಬಹುದು. ಐಐಎಸ್‌ಸಿ ಸಂಸ್ಥಾಪಕ ಜೆಮ್‌ಶೆಡ್‌ಜಿ ಟಾಟಾ ಅವರ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ಮಾರ್ಚ್ ಮೊದಲ ವಾರದ ಶನಿವಾರ ಓಪನ್ ಡೇ ಆಚರಿಸಲಾಗುತ್ತಿದೆ.

<><><><>

ಚಿತ್ರದುರ್ಗ ಜಿಲ್ಲೆಯ ಗ್ರಾಮೀಣ ಪ್ರತಿಭೆಗಳಿಗೆ ಹೆಚ್ಚಿನ ಆದ್ಯತೆ ನೀಡಿ ಉದ್ಯೋಗ ನೀಡುವಂತೆ ಖಾಸಗಿ ಕಂಪನಿಗಳಿಗೆ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಹಾಗೂ ಸಾಂಖಿಕ ಯೋಜನಾ ಖಾತೆ ಸಚಿವ ಡಿ. ಸುಧಾಕರ್ ಸಲಹೆ ನೀಡಿದ್ದಾರೆ. ಮುರುಘರಾಜೇಂದ್ರ ಕ್ರೀಡಾಂಗಣದಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಜಿಲ್ಲಾಡಳಿತ, ಸಂಯುಕ್ತಾಶ್ರಯದಲ್ಲಿ "ಕೌಶಲ್ಯ ರೋಜಗಾರ್ ಮೇಳ", ಉದ್ಘಾಟಿಸಿ ಮಾತನಾಡಿದ ಅವರು, ಮೇಳದಲ್ಲಿ ೫೪ ಕಂಪನಿಗಳು ಭಾಗವಹಿಸಿದ್ದು, ಜಿಲ್ಲೆಯ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕರಿಗೆ ಉದ್ಯೋಗ ನೀಡುವಂತೆ ತಿಳಿಸಿದ್ದಾರೆ.

<><><>

ರಾಜ್ಯದ ವಿವಿಧೆಡೆ ಹಕ್ಕಿಜ್ವರದ ಭೀತಿ ಎದುರಾಗಿದೆ. ಬಳ್ಳಾರಿ ಜಿಲ್ಲೆಯ ಸಂಡೂರು ತಾಲೂಕಿನ ಕುರೇಕುಪ್ಪ ಜಾನುವಾರು ಸಂವರ್ಧನೆ ಮತ್ತು ತರಬೇತಿ ಕೇಂದ್ರದಲ್ಲಿ ಕೆಲ ದಿನಗಳ ಹಿಂದೆ 'ಹಕ್ಕಿಜ್ವರ' ದಿಂದ ಎರಡು ಸಾವಿರ ಕೋಳಿಗಳು ಸಾವನ್ನಪ್ಪಿದೆ. ಈ ಫಾರಂನಲ್ಲಿ ವಿವಿಧ ತಳಿಯ ಕೋಳಿಗಳನ್ನು ಅಭಿವೃದ್ಧಿ ಪಡಿಸಿ ರೈತರಿಗೆ ವಿತರಿಸುವ ಸಲುವಾಗಿ ಅಸೀಲ್ ತಳಿಯ ಕೋಳಿಗಳನ್ನು ಸಾಕಲಾಗಿತ್ತು. ಈ ಕೋಳಿಗಳು ಕಳೆದ ೧೨ ದಿನಗಳಿಂದ ಸಾವನ್ನಪ್ಪುತ್ತಿದ್ದ ಪರಿಣಾಮ ಕೋಳಿಗಳ ಸ್ಯಾಂಪಲ್‌ನ್ನು ಭೋಪಾಲ್‌ನಲ್ಲಿನ ಲ್ಯಾಬ್‌ನಲ್ಲಿ ಪರಿಶೀಲಿಸಿದಾಗ ಕೋಳಿಗಳಲ್ಲಿ ಹಕ್ಕಿಜ್ವರ ಇರುವುದು ದೃಢಪಟ್ಟಿದೆ. ಈ ನಿಟ್ಟಿನಲ್ಲಿ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆಂದು ಪಶುಸಂಗೋಪನಾ ಇಲಾಖೆಯ ಉಪನಿರ್ದೇಶಕ ಡಾ. ವಿನೋದ್ ಕುಮಾರ್ ಹೇಳಿದ್ದಾರೆ. ಹಕ್ಕಿಜ್ವರ ಕಾಣಿಸಿಕೊಂಡಿರುವ ಹಿನ್ನಲೆಯಲ್ಲಿ ಕೇಂದ್ರದ ಸುತ್ತಲೂ ೧ ಕಿಲೋಮೀಟರ್ ವ್ಯಾಪ್ತಿಯನ್ನು ಸೋಂಕಿತ ಪ್ರದೇಶ, ೧೦ ಕಿಲೋಮೀಟರ್ ವ್ಯಾಪ್ತಿ ಪ್ರದೇಶವನ್ನು ಸರ್ವೆಲೆನ್ಸ್ ವಲಯ ಎಂದು ಗುರುತಿಸಲಾಗಿದೆ. ಈ ವಲಯದಲ್ಲಿ ಕೋಳಿ ಮಾಂಸ, ಮೊಟ್ಟೆಯನ್ನು ಮಾರುವಂತಿಲ್ಲ ಎಂದು ಜಿಲ್ಲಾಧಿಕಾರಿಗಳು ಆದೇಶ ಹೊರಡಿಸಿದ್ದಾರೆ. ಜನರು ಆತಂಕ ಪಡುವ ಅಗತ್ಯ ಇಲ್ಲ ಎಂದು ಅವರು ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಒಟ್ಟು ೩೮೩ ರೈತರು ಸುಮಾರು ೬೫ ಲಕ್ಷ ಕೋಳಿಗಳನ್ನು ಸಾಕಾಣಿಕೆ ಮಾಡುತ್ತಿದ್ದಾರೆ. ಕೋಳಿ ಸಾಕಾಣಿಕೆ ಕೇಂದ್ರಗಳಿಗೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲು ಸೂಕ್ತ ನಿರ್ದೇಶನ ನೀಡುವಂತೆ ಜಿಲ್ಲಾ ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ಡಾ. ಕೆ.ಎನ್ ಅನುರಾಧ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಯಾವುದೇ ಪಕ್ಷಿಗಳು ಅಥವಾ ಕೋಳಿಗಳು ಅನುಮಾನಾಸ್ಪದವಾಗಿ, ಅಸಹಜವಾಗಿ ಇಲ್ಲವೇ ಇದ್ದಕ್ಕಿದ್ದಂತೆ ಸಾವುಗಳು ಕಂಡು ಬಂದಲ್ಲಿ ಹತ್ತಿರದ ಪಶು ಸಂಗೋಪನಾ ಇಲಾಖೆಗೆ ಮಾಹಿತಿ ನೀಡಬೇಕು ಎಂದು ನಿರ್ದೇಶನ ನೀಡಿದ್ದಾರೆ.

<><><>

ರಾಜ್ಯಾದ್ಯಂತ ದ್ವಿತೀಯ ಪಿಯುಸಿ ಪರೀಕ್ಷೆ ಇಂದಿನಿಂದ ಆರಂಭವಾಗಿದ್ದು, ಬಹುತೇಕ ಜಿಲ್ಲೆಗಳಲ್ಲಿ ವಿದ್ಯಾರ್ಥಿಗಳು ಮೊದಲ ಪರೀಕ್ಷೆಯನ್ನು ಬರೆದಿದ್ದಾರೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ದ್ವಿತೀಯ ಪಿಯುಸಿ

ಪರೀಕ್ಷೆಗಳನ್ನು ಶಾಂತಿಯುತವಾಗಿ, ಸುಸೂತ್ರವಾಗಿ ನಡೆಸುವ ನಿಟ್ಟಿನಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿನ ೨೦೦ ಮೀಟರ್ ಪ್ರದೇಶದಲ್ಲಿ ನಿಷೇಧಾಜ್ಞೆ ಘೋಷಿಸಿ ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ಆದೇಶ ಹೊರಡಿಸಿದ್ದಾರೆ. ದ್ವಿತೀಯ ವರ್ಷದ ಪಿಯುಸಿ ಪರೀಕ್ಷೆಗಳು ಇಂದು ಗಣಿನಾಡು ಬಳ್ಳಾರಿ ಜಿಲ್ಲೆಯ ೪೩ ಕೇಂದ್ರಗಳಲ್ಲಿ ಶಾಂತಿಯುತವಾಗಿ ನಡೆಯಿತು. ದಾವಣಗೆರೆ ಜಿಲ್ಲೆಯ ೩೫ ಕೇಂದ್ರಗಳಲ್ಲಿ ಒಟ್ಟು ೨೧ ಸಾವಿರದ ೧೫೩ ವಿದ್ಯಾರ್ಥಿಗಳು ಹೆಸರು ನೊಂದಾಯಿಸಿದ್ದಾರೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಕರಿಸಿದ್ದಪ್ಪ ತಿಳಿಸಿದ್ದಾರೆ. ಉಳಿದಂತೆ ಹಾವೇರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, ಜಿಲ್ಲಾಡಳಿತ ಸಕಲ ಸಿದ್ಧತೆ ಕೈಗೊಂಡಿತ್ತು.

<><><>

ಕರ್ನಾಟಕ ಕಿರು ಸಾಲ ಮತ್ತು ಸಣ್ಣ ಸಾಲ ಆಧ್ಯಾದೇಶ, ೨೦೨೫ ಜಾರಿಯಾದ ಫೆಬ್ರವರಿ ೧೨ ರಿಂದ ಮೂವತ್ತು ದಿನಗಳೊಳಗಾಗಿ ಸಣ್ಣ ಹಣಕಾಸು ಸಂಸ್ಥೆ, ಹಾಗೂ ಲೇವಾದೇವಿದಾರರು ನೋಂದಣಿಗಾಗಿ ಅರ್ಜಿ ಸಲ್ಲಿಸುವಂತೆ ಜಿಲ್ಲಾಧಿಕಾರಿ ಡಾಕ್ಟರ್ ವಿಜಯಮಂಹಾತೇಶ ದಾನಮ್ಮನವರ ತಿಳಿಸಿದ್ದಾರೆ. ರಾಜ್ಯದಲ್ಲಿ ಸಣ್ಣ ಹಣಕಾಸು ಕಂಪನಿಗಳು ಸಾಲ ವಸೂಲಾತಿ ನೆಪದಲ್ಲಿ ಸಾಲಗಾರರಿಗೆ ಕಿರುಕುಳ ನೀಡುತ್ತಿರುವ ಪ್ರಕರಣಗಳು ಜಾಸ್ತಿಯಾಗುತ್ತಿದ್ದು, ಈ ಬಗ್ಗೆ ಕ್ರಮಕೈಗೊಳ್ಳುವ ನಿಟ್ಟಿನಲ್ಲಿ ಆಧ್ಯಾದೇಶ ಫೆಬ್ರವರಿ ೧೨ರಿಂದ ಜಾರಿಗೆ ಬಂದಿದೆ. ಜಿಲ್ಲಾಧಿಕಾರಿ ಕಾರ್ಯಾಲಯದಲ್ಲಿ ನೋಂದಣಿ ಕುರಿತು ಕ್ರಮ ಕೈಗೊಳ್ಳಲು ತಂಡವನ್ನು ಈಗಾಗಲೇ ರಚಿಸಲಾಗಿದೆ ಎಂದು ಹೇಳಿದ್ದಾರೆ.

<><><>

ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಮಹಿಳಾ ಪ್ರೀಮಿಯಲ್ ಲೀಗ್ - ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ಇದೇ ೩ ರಿಂದ ಲಖನೌದಲ್ಲಿ ಡಬ್ಲ್ಯೂಪಿಎಲ್‌ನ ೩ನೇ ಚರಣ ಆರಂಭವಾಗಲಿದೆ. ಅಂಕಪಟ್ಟಿಯಲ್ಲಿ ೩ನೇ ಸ್ಥಾನದಲ್ಲಿರುವ ಆರ್‌ಸಿಬಿ ಇಂದು ಗೆಲುವು ಸಾಧಿಸುವ ತವಕದಲ್ಲಿದೆ.

<><><>

ಮಂತ್ರಾಲಯದಲ್ಲಿ ಮಹಾ ಗುರುವೈಭವೋತ್ಸವ ನಡೆಯುತ್ತಿದೆ. ಆಂಧ್ರಪ್ರದೇಶದ ಶಿಕ್ಷಣ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ನಾ ರಾ ಲೋಕೇಶ್ ಮಂತ್ರಾಲಯಕ್ಕೆ ಭೇಟಿ ನೀಡಿ ದರ್ಶನ ಪಡೆದರು. ಆಚರಣೆಯ ಭಾಗವಾಗಿ, ರಾಘವೇಂದ್ರ ಸ್ವಾಮಿಗಳ ಮೂಲ ಪಾದುಕೆಗಳಿಗೆ ಪೂಜೆ ನೆರವೇರಿಸಲಾಯಿತು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>